# ಕರ್ನಾಟಕ ವಿಧಾನ ಪರಿಷತ್ತು

1.ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 608
2.ಮಾನ್ಯ ಸದಸ್ಯರ ಹೆಸರು : ಶ್ರೀ ಮರಿತಿಬ್ಬೇಗೌಡ
3.ಉತ್ತರಿಸಬೇಕಾದ ದಿನಾಂಕ : 21.02.2023
4.ಉತ್ತರಿಸುವ ಸಚಿವರು : ಕೈಮಗ್ಗ ಮತ್ತು ಜವಳಿ, ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ಸಚಿವರು

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಪ್ರಸಕ್ತ ಸಾಲಿನಲ್ಲಿ ಮಂಡ್ಯ ಸಕ್ಕರೆ ಕಾರ್ಖಾನೆಯಲ್ಲಿ ಇದುವರೆವಿಗೂ ಅರೆದ ಕಬ್ಬಿನ ಪ್ರಮಾಣವೆಷ್ಟು; | ಮೈಸೂರು ಸಕ್ಕರೆ ಕಾರ್ಖಾನೆಯು ದಿನಾಂಕ:20.09.2022 ರಿಂದ ದಿನಾಂಕ: 02.02.2023 ರವರೆಗೆ ಒಟ್ಟು 1,01,842.687 ಮೆ.ಟನ್ ಕಬ್ಬು ನುರಿಸಲಾಗಿರುತ್ತದೆ. |
| (ಆ) | ಪ್ರಸಕ್ತ ಸಾಲಿನಲ್ಲಿ ಎಷ್ಟು ಸಕ್ಕರೆ ಉತ್ಪಾದನೆಯಾಗಿದೆ; ಹಾಗೂ ಕಬ್ಬು ಸರಬರಾಜು ಮಾಡಿದ ರೈತರಿಗೆ ನೀಡಬೇಕಾಗಿರುವ ಬಾಕಿ ಹಣವೆಷ್ಟು; (ವಿವರ ನೀಡುವುದು) | ಮೈಸೂರು ಸಕ್ಕರೆ ಕಾರ್ಖಾನೆಯ ಕಬ್ಬು ನುರಿಸಿ 35,645 ಕ್ವಿಂಟಾಲ್ ಸಕ್ಕರೆ ಉತ್ಪಾದನೆಯನ್ನು ಮಾಡಲಾಗಿದೆ ಹಾಗೂ ರೈತರಿಗೆ ಒಟ್ಟು ಪಾವತಿಸಬೇಕಾದ ಮೊತ್ತ ರೂ.2,872.98 ಲಕ್ಷಗಳು ಆಗಿರುತ್ತದೆ. ಈ ಪೈಕಿ ಈಗಾಗಲೇ ರೈತರಿಗೆ ರೂ. 2630.80 ಲಕ್ಷಗಳನ್ನು ಪಾವತಿಸಲಾಗಿದೆ ಹಾಗೂ 300 ರೈತರಿಗೆ ರೂ. 242.90 ಲಕ್ಷಗಳನ್ನು ಪಾವತಿಸುವುದು ಬಾಕಿ ಇರುತ್ತದೆ. |
| (ಇ) | ಪ್ರಸಕ್ತ ಸಾಲಿನಲ್ಲಿ ಒಂದು ಟನ್ ಕಬ್ಬಿಗೆ ಪ್ರೋತ್ಸಾಹಧನ ಸೇರಿದಂತೆ ಎಷ್ಟು ಮೊತ್ತ ಪಾವತಿಸಲಾಗುತ್ತಿದೆ; ಹಾಗೂ ಯಾವ ಕಾಲಮಿತಿಯಲ್ಲಿ ಬಾಕಿ ಹಣವನ್ನು ಪಾವತಿಸಲಾಗುವುದು? | ದಿ ಮೈಸೂರು ಷುಗರ್ ಕಂಪನಿಗೆ 2022-23ನೇ ಹಂಗಾಮಿನಲ್ಲಿ ಕಬ್ಬು ಪೂರೈಸಿದ ರೈತರಿಗೆ ಪ್ರತಿ ಟನ್ ಕಬ್ಬಿಗೆ ರೂ.2821/-ಗಳನ್ನು ಪಾವತಿಸಲಾಗುತ್ತಿದೆ ಹಾಗೂ ರೈತರಿಗೆ ಬಾಕಿ ಇರುವ ಮೊತ್ತ ರೂ.242.90 ಲಕ್ಷಗಳನ್ನು ಪಾವತಿಸಲು ಕ್ರಮವಹಿಸಲಾಗುವುದು. |

ಸಂಖ್ಯೆ: ಸಿಐ 81 ಸಿಓಎಫ್ 2023

(ಶಂಕರ.ಬ.ಪಾಟೀಲ ಮುನೇನಕೊಪ್ಪ)
ಕೈಮಗ್ಗ ಮತ್ತು ಜವಳಿ, ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ಸಚಿವರು